ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2017–18** **ದಿನಾಂಕ: 15-11-2018**

# ಪತ್ರಿಕಾ ಆಮಂತ್ರಣ

1. ಕಾವೇರಿ ಆನ್‌ಲೈನ್ ಸೇವೆ ಉದ್ಘಾಟನೆ:

   ಹೆಚ್.ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
   ಉಪಸ್ಥಿತಿ:

   ಆರ್.ವಿ. ದೇಶಪಾಂಡೆ, ಕಂದಾಯ ಸಚಿವರು
   ದಿನಾಂಕ: 16–11–2018 ಶುಕ್ರವಾರ ಬೆಳಿಗ್ಗೆ 10–00 ಗಂಟೆಗೆ
   ಸ್ಥಳ: ವಿಧಾನ ಸೌಧ ಸಮ್ಮೇಳನ ಸಭಾಂಗಣ, ಬೆಂಗಳೂರು

2. ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ: (ನವೆಂಬರ್ 14 ರಿಂದ 20ರ ವರೆಗೆ)
   ಪುಸ್ತಕ ದಾನ ಹಾಗೂ ಸದಸ್ಯತ್ವ ನೋಂದಣಿ ಅಭಿಯಾನದ ಉದ್ಘಾಟನಾ ಸಮಾರಂಭ

   ಉದ್ಘಾಟನೆ:
   ಡಾ. ಜಿ. ಪರಮೇಶ್ವರ್, ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

   ಅಧ್ಯಕ್ಷತೆ:
   ರಾಮಲಿಂಗಾ ರೆಡ್ಡಿ, ಶಾಸಕರು, ಬಿ.ಟಿ.ಎಂ. ಬಡಾವಣೆ ವಿಧಾನಸಭಾ ಕ್ಷೇತ್ರ, ಬೆಂಗಳೂರು.

   ದಿನಾಂಕ: 16–11–2018, ಗುರುವಾರ ಸಮಯ: ಬೆಳಿಗ್ಗೆ 11–00 ಗಂಟೆಗೆ.
   ಸ್ಥಳ: ಫೋರಂ ಮಾಲ್, ಈಜಿಪುರ ವಾರ್ಡ್ ನಂ 148, ಕೋರಮಂಗಲ, ಹೊಸೂರು ರಸ್ತೆ, ಬೆಂಗಳೂರು.

3. ಕೃಷಿಮೇಳ –2018
   ಪ್ರಶಸ್ತಿ ಪ್ರದಾನ ಸಮಾರಂಭ

   ಗೌರವಾನ್ವಿತ ಅತಿಥಿ:
   ಡಾ. ಜಿ. ಪರಮೇಶ್ವರ್, ಉಪ ಮುಖ್ಯಮಂತ್ರಿಗಳು

ಅಧ್ಯಕ್ಷತೆ:
ಡಾ. ಎಸ್. ರಾಜೇಂದ್ರ ಪ್ರಸಾದ್, ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.

ದಿನಾಂಕ: 16–11–2018, ಗುರುವಾರ, ಸಮಯ: ಮಧ್ಯಾಹ್ನ 2–00 ಗಂಟೆಗೆ.

ಸ್ಥಳ: ಗಾಂಧಿ ಕೃಷಿ ವಿಜ್ಞಾನ ಕೇಂದ್ರ, (ಜಿ.ಕೆ.ವಿ.ಕೆ.), ಬೆಂಗಳೂರು.

ಸೂಚನೆ: ಈ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು ವಾಹನವು ಅಂದು ಬೆಳಿಗ್ಗೆ 10.00 ಗಂಟೆಗೆ ನಗರದ ಕಬ್ಬನ್ ಉದ್ಯಾನವನದ ಪ್ರೆಸ್‌ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

ಸಂಪರ್ಕ: : ಡಾ. ಕೆ. ಶಿವರಾಮು, ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾತಜ್ಞರು.

ಮೊಬೈಲ್ ಸಂಖ್ಯೆ 9972035456/8277810930

4. Farewell Address to Hon'ble Sri Justice Raghavendra S. Chauhan and Hon'ble Dr. Justice Vineet Kothari, Judges, High Court of Karnataka.

   Date : 16-11-2018, Friday, Time : 2-00 PM.

   Venue: Court Hall No. 1 of the Principal Bench of the High Court of Karnataka.

5. ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತಿಗೆ ಪ್ರಥಮ ಬಾರಿಗೆ ಆಯ್ಕೆಯಾದ ಶಾಸಕರುಗಳಿಗೆ "ತರಬೇತಿ ಶಿಬಿರ"ದ – ಸಮಾರೋಪ ಸಮಾರಂಭ.

   ದಿನಾಂಕ: 16–11–2018, ಶುಕ್ರವಾರ, ಸಂಜೆ 5–00 ಗಂಟೆಗೆ
   ಸ್ಥಳ: ಕೊಠಡಿ ಸಂಖ್ಯೆ 419, 4 ನೇ ಮಹಡಿ, ವಿಕಾಸಸೌಧ, ಬೆಂಗಳೂರು

## ಪತ್ರಿಕಾ ಪ್ರಕಟಣೆ

**ಸಂಖ್ಯೆ 1296/1396**

## ವಿವಿ ಕೃಷಿ ಸಂಶೋಧನೆಗಳ ಕುರಿತು ರೈತರಿಗೆ ಅರಿವು ಮೂಡಿಸುವ ಅಗತ್ಯವಿದೆ

– ರಾಜ್ಯಪಾಲ ವಜೂಭಾಯಿ ವಾಲಾ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕೃಷಿ ವಿಶ್ವವಿದ್ಯಾಲಯಗಳ ಸಂಶೋಧನೆಗಳು ಕೇವಲ ವಿಶ್ವ ವಿದ್ಯಾನಿಲಯದ ಆವರಣದೊಳಗೆ ವಿದ್ಯಾರ್ಥಿಗಳಿಗೆ ಮಾತ್ರ ಮೀಸಲಾಗದೆ ಹಳ್ಳಿಗಳಿಗೆ ಭೇಟಿನೀಡಿ ರೈತರೊಂದಿಗೆ ಸಂವಾದಗಳನ್ನು ಏರ್ಪಡಿಸಿ ಅವರಲ್ಲಿ ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ರಾಜ್ಯಪಾಲರಾದ ವಜೂಭಾಯಿ ವಾಲಾ ಅವರು ಕೃಷಿ ವಿದ್ವಾಂಸರಿಗೆ ಹಾಗೂ ವಿದ್ಯಾರ್ಥಿಗಳಿಗೆ ಕರೆಕೊಟ್ಟರು.

ಇಂದು ನಗರದ ಗಾಂಧಿ ಕೃಷಿ ವಿಜ್ಞಾನ ಕೇಂದ್ರದ ಆವರಣಲ್ಲಿ ಕೃಷಿ ಇಲಾಖೆ, ಜಲಾನಯನ ಅಭಿವೃದ್ಧಿ, ತೋಟಗಾರಿಕೆ, ರೇಷ್ಮೆ, ಅರಣ್ಯ, ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಗ್ರಾಮೀಣಾಭಿವೃದ್ಧಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರದಲ್ಲಿ ಕೃಷಿ ವಿಶ್ವವಿದ್ಯಾನಿಲಯ ಹಮ್ಮಿಕೊಂಡಿದ್ದ ಕೃಷಿ ಮೇಳ–2018 ಅನ್ನು ಉದ್ಘಾಟಿಸಿ ಮಾತನಾಡಿದ ಅವರು ಬೆಂಗಳೂರು ಕೃಷಿ ವಿಶ್ವ ವಿದ್ಯಾನಿಲಯ ದೇಶದಲ್ಲಿಯೇ ಅತ್ಯುತ್ತಮ ವಿಶ್ವವಿದ್ಯಾನಿಲಯಗಳಲ್ಲಿ ಒಂದಾಗಿದ್ದು ಇನ್ನೂರಕ್ಕೂ ಹೆಚ್ಚು ವಿವಿಧ ಹೊಸ ತಳಿಗಳನ್ನು ಕೊಡುಗೆ ನೀಡಿದ ವಿ.ವಿ. ಆಗಿದೆ ಎಂದು ತಿಳಿಸಿದರು.

ಕೃಷಿ ಮೇಳ ಆಯೋಜಿಸುತ್ತಿರುವುದಕ್ಕಾಗಿ ವಿ.ವಿ. ಗೆ ಧನ್ಯವಾದ ತಿಳಿಸಿದ ಅವರು ಯಾವುದೇ ಉತ್ತಮ ಕಾರ್ಯಗಳನ್ನು ಮಾಡುವವರಿಗೆ ಸಹಾಯ ಮಾಡುವುದು ನಮ್ಮ ಕರ್ತವ್ಯವಾಗಿದೆ. ಭಾರತ ಕೃಷಿ ರಾಷ್ಟ್ರ. ಇಲ್ಲಿನ ಬಹುತೇಕ ಜನರು ಹಳ್ಳಿಗಳಲ್ಲಿ ವಾಸಿಸುತ್ತಿದ್ದು ಅವರ ಮೂಲ ಕಸುಬು ಕೃಷಿಯಾಗಿದೆ. ಈ ದೇಶದ ಮುಕ್ಕಾಲು ಪಾಲು ಜನರ ಕಸುಬು ಆಗಿರುವ ಕೃಷಿಗೆ ಹೆಚ್ಚಿನ ಒತ್ತನ್ನು ನೀಡುವ ಅವಶ್ಯಕತೆ ಇದೆ ಎಂದು ಹೇಳಿದರು.

ದೇಶದ ಅಭಿವೃದ್ಧಿಯಲ್ಲಿ ಕೈಗಾರಿಕಾ ಕ್ಷೇತ್ರದ ಬೆಳವಣಿಗೆ ಜೊತೆಯಲ್ಲಿ ಕೃಷಿ ಕ್ಷೇತ್ರದ ಬೆಳವಣಿಗೆ ಸಹ ಸಮತೋಲನವನ್ನು ಕಾಪಾಡಿಕೊಳ್ಳುವತ್ತ ಸಾಗಿದಲ್ಲಿ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ. ಕರ್ನಾಟಕ ಸಂಶೋಧನೆಗಳ ನಾಡು ಎಂಬ ಹೆಮ್ಮೆ ಇದೆ. ನವೀನ ಸಂಶೋಧನೆಗಳಿಂದ ರೈತರ ಬದುಕು ಸುಧಾರಿಸುವಂತಾಗಬೇಕು.

ನದಿ ಜೋಡಣೆ ಕುರಿತು ಗಂಭೀರವಾಗಿ ಯೋಚಿಸಬೇಕಾದ ಅವಶ್ಯಕತೆ ಇದೆ. ನೀರಿನ ಸದ್ಬಳಕೆ ಕುರಿತು ಅರಿವು ಮೂಡಿಸುವ ಅಗತ್ಯವಿದೆ. ಅವಶ್ಯಕತೆ ಇದ್ದಷ್ಟು ಮಾತ್ರ ನೀರನ್ನು ಬಳಸಬೇಕು ನಮ್ಮ ಹಾಗೇ ಪ್ರಕೃತಿ ನೀಡುವ ನೀರಿನ ಮೇಲೆ ಇತರ ಪ್ರಾಣಿ ಪಕ್ಷಿಗಳಿಗೂ ಸಹ ಹಕ್ಕಿದೆ ಇದೆ ಎಂದರು.

ಕೃಷಿ ವಿ.ವಿ. ಗಳಲ್ಲಿ ಈ ಹಿಂದೆ ಮಹಿಳಾ ವಿದ್ಯಾರ್ಥಿಗಳ ಸಂಖ್ಯೆ ಹುಡುಗರಿಗೆ ಹೋಲಿಸಿದಲ್ಲಿ ಕಡಿಮೆ ಇರುತ್ತಿತ್ತು. ಆದರೆ ಇಂದು ಶೇ 60 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಮಹಿಳೆಯರೇ ಆಗಿದ್ದಾರೆ. ಇದೊಂದು ಉತ್ತಮ ಬೆಳವಣಿಗೆ ಎಂದರು.

ಕೃಷಿ ಸಚಿವ ಎನ್. ಎಚ್. ಶಿವಶಂಕರರೆಡ್ಡಿ ಅವರು ಮಾತನಾಡಿ ಬೆಂಗಳೂರು ಕೃಷಿ ವಿಶ್ವ ವಿದ್ಯಾನಿಲಯ ಕೃಷಿ ಕ್ಷೇತ್ರಕ್ಕೆ ಉತ್ತಮ ಕೊಡುಗೆಯನ್ನು ನೀಡುತ್ತಿದೆ. ಕೃಷಿ ಮೇಳದಲ್ಲಿ ಹೊಸತಳಿ, ತಂತ್ರಜ್ಞಾನ, ಅವಿಷ್ಕಾರಗಳನ್ನು ರೈತರಿಗೆ ಪರಿಚಯಿಸುವ ದೃಷ್ಟಿಯಿಂದ 650 ವಸ್ತು ಪ್ರದರ್ಶನ ಮಳಿಗೆಗಳನ್ನು ತೆರೆಯಲಾಗಿದೆ.

ಸರ್ಕಾರ ರೈತರ ಪರವಾಗಿ ಅನೇಕ ಉತ್ತಮ ನಿಲುವುಗಳನ್ನು ತೆಗೆದುಕೊಂಡಿದೆ. ದೇಶದಲ್ಲಿಯೇ ಪ್ರಪ್ರಥಮ ಬಾರಿಗೆ ಕೃಷಿ ವಿ.ವಿ.ಗಳಲ್ಲಿ ಶೈಕ್ಷಣಿಕ ಸುಧಾರಣೆಗಾಗಿ ಮೌಲ್ಯಮಾಪನ ಸಮಿತಿ ರಚಿಸಲಾಗಿದೆ. ಕೃಷಿ ಶಿಕ್ಷಣದಲ್ಲಿ ಖಾಸಗಿ ವಿ.ವಿ. ಗಳಿಗೆ ಅವಕಾಶವಿಲ್ಲ ಎಂದು ಅವರು ಹೇಳಿದರು.

ಪ್ರಸ್ತುತ ಸರ್ಕಾರ ಕೃಷಿಗಾಗಿ ಪ್ರತ್ಯೇಕವಾಗಿ ಕೃಷಿ ಅಗ್ರಿ ಕ್ಯಾಬಿನೆಟ್ ಮಾಡಲು ಯೋಜಿಸಿದೆ. ರೈತರಿಗಾಗಿ ರಾಜ್ಯದಲ್ಲಿ ಇಸ್ರೇಲ್ ಮಾದರಿ ಕೃಷಿ ತಂತ್ರಜ್ಞಾನ ಜಾರಿಗೆ ತರಲು ಸಿದ್ಧತೆಗಳು ನಡೆದಿದ್ದು, ಜೊತೆಯಲ್ಲಿ ಸಿರಿಧಾನ್ಯ ಸಾವಯವ ಕೃಷಿಗೆ ಹೆಚ್ಚಿನ ಪ್ರೋತ್ಸಾಹ ನೀಡಲು ಸರ್ಕಾರ ಬದ್ಧವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ರೈತ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು. ಡಾ. ಎಂ.ಎಚ್. ಮರೀಗೌಡ ರಾಜ್ಯ ಮಟ್ಟದ ಅತ್ಯುತ್ತಮ ತೋಟಗಾರಿಕಾ ರೈತ ಪ್ರಶಸ್ತಿಯನ್ನು ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನ ಕನ್ನೂರು ಗ್ರಾಮದ ಶ್ರೀ ಪ್ರಸಾದ ರಾಮ ಹೆಗಡೆ, ಕ್ಯಾನ್ ಬ್ಯಾಂಕ್ ಅತ್ಯುತ್ತಮ ರೈತ ಪ್ರಶಸ್ತಿ ಕೋಲಾರ ಜಿಲ್ಲೆ ಹಾಗೂ ತಾಲ್ಲೂಕಿನ ಮದನಹಳ್ಳಿ ಗ್ರಾಮದ ಎಂ.ಎನ್. ರವಿಶಂಕರ್, ಕ್ಯಾನ್ ಬ್ಯಾಂಕ್ ಅತ್ಯುತ್ತಮ ರೈತ ಮಹಿಳಾ ಪ್ರಶಸ್ತಿ ಹಾಸನ ಜಿಲ್ಲೆಯ ಗೌರೀಪುರಂನ ಶ್ರೀಮತಿ ಕೆ. ಹೇಮಾ ಅನಂತ್ ಅವರುಗಳು ಭಾಜನರಾಗಿದ್ದಾರೆ. ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಉತ್ತಮ ರೈತರನ್ನು ಗುರುತಿಸಿ ವಿವಿಧ ಕ್ಷೇತ್ರಗಳ ಅಡಿಯಲ್ಲಿ ಒಟ್ಟು 145 ಕೃಷಿಕರಿಗೆ ಪ್ರಶಸ್ತಿ ನೀಡಲಾಗುತ್ತದೆ.

ಇದೇ ಸಂದರ್ಭದಲ್ಲಿ ರಾಜ್ಯಪಾಲರು ಕೃಷಿ ವಿಶ್ವ ವಿದ್ಯಾನಿಲಯ ಬೆಂಗಳೂರು ಇವರು ಅಭಿವೃದ್ಧಿಪಡಿಸಿರುವ ರಾಗಿ : ಕೆ.ಎಂ.ಆರ್–630, ಅಕ್ಕಿ ಅವರೆ : ಕೆ.ಬಿ.ಆರ್–1, ಸೋಯಾ ಅವರೆ ಕೆ.ಬಿ.ಎಸ್–23 ಹಾಗೂ ಸೂರ್ಯಕಾಂತಿ : ಕೆ.ಬಿ.ಎಸ್.ಹೆಚ್ –78 ನಾಲ್ಕು ಈ ಹೊಸ ತಳಿಗೆಗಳನ್ನು ಲೋಕಾರ್ಪಣೆ ಮಾಡಿದರು.

ವಿ.ವಿ. ರೈತರಿಗಾಗಿ ಸಿದ್ದಪಡಿಸಿರುವ ವಿಶೇಷ 2019 ರ ನೂತನ ಕ್ಯಾಲೆಂಡರ್ ಅನ್ನು ಸಹ ಬಿಡುಗಡೆ ಮಾಡಲಾಯಿತು. ಈ ಕೃಷಿ ಮೇಳವು ಇಂದಿನಿಂದ ನವೆಂಬರ್ 18 ರವರೆಗೆ ಒಟ್ಟು ನಾಲ್ಕು ದಿನಗಳ ಕಾಲ ನಡೆಯಲಿದ್ದು ಸಾರ್ವಜನಿಕರಿಗೆ ಪ್ರವೇಶ ಉಚಿತವಾಗಿರುತ್ತದೆ.

**ಸಂಖ್ಯೆ 1297/1397**

# ಎರಡು ದಿನದ ವಿಚಾರ ಸಂಕಿರಣ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ವತಿಯಿಂದ "ಭಾರತದಲ್ಲಿನ ಪರಿಶಿಷ್ಟ ಪಂಗಡಗಳ ರಕ್ಷಣೆ, ಕಲ್ಯಾಣ ಮತ್ತು ಸಬಲೀಕರಣಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು ಮತ್ತು ಕಾರ್ಯಕ್ರಮಗಳು" (Central and State Government Schemes and Programmes for Protection, Welfare and Empowerment of Scheduled Tribes in India)" ಎಂಬ ವಿಷಯ ಕುರಿತು ಎರಡು ದಿನದ ಪ್ರಾದೇಶಿಕ ವಿಚಾರ ಸಂಕಿರಣವನ್ನು ಡಿಸೆಂಬರ್ 28 ಹಾಗೂ 29 ರಂದು ಬೆಂಗಳೂರು ನಗರದಲ್ಲಿ ಆಯೋಜಿಸಲಾಗಿದೆ.

ಆಸಕ್ತ ಸಂಶೋಧನಾಸಕ್ತರು/ವಿದ್ಯಾರ್ಥಿಗಳು, ಸಂಶೋಧನಾ ವಿದ್ವಾಂಸರು, ಉಪನ್ಯಾಸಕರು ಮತ್ತು ಪ್ರಾಧ್ಯಾಪಕರು ತಮ್ಮ ಸಾರಾಂಶವನ್ನು ಡಿಸೆಂಬರ್ 21 ರ ಒಳಗೆ ಕಚೇರಿಯ ಇಮೇಲ್ email:trimysore@gmail.com ಮೂಲಕ ಕಳುಹಿಸಿಕೊಡಬಹುದಾಗಿದೆ ಎಂದು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

**ಸಂಖ್ಯೆ 1298/1398**

# ಆಳ್ವಾಸ್ ನುಡಿಸಿರಿ – 2018

## ಕನ್ನಡ ಮತ್ತು ಪ್ರಾದೇಶಿಕ ಭಾಷಾ ಚಲನಚಿತ್ರ ಸಿರಿ ಉದ್ಘಾಟನಾ ಸಮಾರಂಭ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿ ವತಿಯಿಂದ ಆಳ್ವಾಸ್ ನುಡಿಸಿರಿ –2018 ಅಂಗವಾಗಿ ನವೆಂಬರ್ 16 ರಂದು ಮಧ್ಯಾಹ್ನ 2–00 ಗಂಟೆಗೆ ಮೂಡಬಿದರೆ ವಿದ್ಯಾಗಿರಿಯ ಕುವೆಂಪು ಸಭಾಂಗಣದಲ್ಲಿ ಕನ್ನಡ ಮತ್ತು ಪ್ರಾದೇಶಿಕ ಭಾಷಾ ಚಲನಚಿತ್ರ ಸಿರಿ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಈ ಸಮಾರಂಭದ ಉದ್ಘಾಟನೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಡಾ. ನಾಗತಿಹಳ್ಳಿ ಚಂದ್ರಶೇಖರ್ ಅವರು ನೆರವೇರಿಸಲಿದ್ದಾರೆ.

ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ. ಎಂ. ಮೋಹನ್ ಆಳ್ವ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಕೇಂದ್ರ ಸಾಹಿತ್ಯ ಅಕಾಡೆಮಿಯ ಪ್ರಶಸ್ತಿ ಪುರಸ್ಕೃತ ಡಾ. ನಾ. ದಾಮೋದರ ಶೆಟ್ಟಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ನವೆಂಬರ್ 16 ರಂದು (ಶುಕ್ರವಾರ) ಮಧ್ಯಾಹ್ನ 3–00 ಗಂಟೆಗೆ ಚಂಪಾ ಶೆಟ್ಟಿ ನಿರ್ದೇಶನದ ಅಮ್ಮಚ್ಚಿಯೆಂಬ ನೆನಪು (ಕುಂದ ಕನ್ನಡ) ಹಾಗೂ ಸಂಜೆ 5–00 ಗಂಟೆಗೆ ಗೋಪಿ ಪೀಣ್ಯ ನಿರ್ದೇಶನದ ‘ತಳಂಗ್ ನೀರ್’ (ಕೊಡವ) ಚಿತ್ರ ಪ್ರದರ್ಶನಗೊಳ್ಳಲಿದೆ.

ನವೆಂಬರ್ 17 ರಂದು (ಶನಿವಾರ) ಬೆಳಿಗ್ಗೆ 10–00 ಗಂಟೆಗೆ ಎಲ್.ಎನ್. ಮುಕುಂದ ರಾಜ್ ನಿರ್ದೇಶನದ ಕಾಡಹಾದಿಯ ಹೂಗಳು (ಕನ್ನಡ), ಮಧ್ಯಾಹ್ನ 3–00 ಗಂಟೆಗೆ ಆದರ್ಶ್ ಹೆಚ್. ಈಶ್ವರಪ್ಪ ನಿರ್ದೇಶನದ ಶುದ್ಧಿ (ಕನ್ನಡ) ಹಾಗೂ ಸಂಜೆ 5–30 ಗಂಟೆಗೆ ಅಭಯ ಸಿಂಹ ನಿರ್ದೇಶನದ ‘ಪಡ್ಡಾಯಿ’ (ತುಳು) ಚಿತ್ರ ಪ್ರದರ್ಶನಗೊಳ್ಳಲಿದೆ.

ನವೆಂಬರ್ 18 ರಂದು (ಭಾನುವಾರ) ಬೆಳಿಗೆ 10–00 ಗಂಟೆಗೆ ಹ್ಯಾರಿ ಫರ್ನಾಂಡಿಸ್ ನಿರ್ದೇಶನದ ಸೋಫಿಯಾ–ಎ–ಡ್ರೀಮ್ ಗರ್ಲ್ (ಕೊಂಕಣಿ) ಹಾಗೂ ಮಧ್ಯಾಹ್ನ 3–00 ಗಂಟೆಗೆ ಎನ್.ಆರ್. ನಂಜುಂಡೆಗೌಡ ನಿದೇಶನದ ಹೆಬ್ಬೆಟ್ ರಾಮಕ್ಕ (ಕನ್ನಡ) ಚಿತ್ರ ಪ್ರದರ್ಶನಗೊಳ್ಳಲಿದೆ. ಪ್ರತಿ ಚಲನಚಿತ್ರ ಮುಗಿದ ನಂತರ ಆಯಾ ಚಿತ್ರದ ನಿರ್ದೇಶಕರ ಜೊತೆ ಸಂವಾದ ಕಾರ್ಯಕ್ರಮ ನಡೆಯಲಿದೆ.

ಹೆಚ್ಚಿನ ವಿವರ ಹಾಗೂ ಮಾಹಿತಿಗಾಗಿ ಡಾ. ಮೌಲ್ಯ ಬಿ, ಸಂಚಾಲಕರು, ಇವರ ಮೊಬೈಲ್ ಸಂಖ್ಯೆ 94803 41338 ಮೂಲಕ ಸಂಪರ್ಕಿಸಬಹುದಾಗಿದೆ.

**ಸಂಖ್ಯೆ 1299/1399**

# ಅಧಿಕಾರ ಸ್ವೀಕಾರ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಕರ್ನಾಟಕ ರಾಜ್ಯ ಕಾರ್ಯದರ್ಶಿಗಳ ಹುದ್ದೆಗೆ ಕೆ. ಗಂಗಪ್ಪ ಗೌಡ ಅವರನ್ನು ನೇಮಕ ಮಾಡಲಾಗಿದ್ದು ಅವರು ಬುಧವಾರ ಅಧಿಕಾರ ವಹಿಸಿಕೊಂಡಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕೆ. ಗಂಗಪ್ಪ ಗೌಡ, ರಾಜ್ಯ ಕಾರ್ಯದರ್ಶಿ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರಾಜ್ಯ ಸಂಸ್ಥೆ, ರಾಜ್ಯ ಕೇಂದ್ರ ಕಚೇರಿ, ಶಾಂತಿಗೃಹ, ನಂ 39, ಅರಮನೆ ರಸ್ತೆ, ಬೆಂಗಳೂರು – 560 001. ದೂರವಾಣಿ ಸಂಖ್ಯೆ 080–22260017/22267470 (ಕಚೇರಿ) ಹಾಗೂ ಮೊಬೈಲ್ ನಂ : 9845547653 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ 1300/1400**

# ನವೆಂಬರ್ 17 ರಿಂದ 28 ರವರೆಗೆ ಮಕ್ಕಳ ಸಮೀಕ್ಷಾ ಕಾರ್ಯ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಶಿಕ್ಷಣ ಮಗುವಿನ ಮೂಲಭೂತ ಹಕ್ಕಾಗಿರುವುದರಿಂದ 6 ರಿಂದ 16 ವರ್ಷ ವಯೋಮಾನದ ಯಾವುದೇ ಮಗು ಶಾಲಾ ಶಿಕ್ಷಣದಿಂದ ವಂಚಿತವಾಗಬಾರದೆಂಬ ಉದ್ದೇಶದಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯು ಇತರೆ ಭಾಗೀದಾರ ಇಲಾಖೆಗಳು ಮತ್ತು ಸರ್ಕಾರೇತರ ಸ್ವಯಂಸೇವ ಸಂಸ್ಥೆಗಳ ಸಹಭಾಗಿತ್ವದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ

ವ್ಯಾಪ್ತಿಯಲ್ಲಿ ನವೆಂಬರ್ 17 ರಿಂದ 28 ರವರೆಗೆ ಶಾಲೆಯಿಂದ ಹೊರಗುಳಿದ ಮಕ್ಕಳ ಸಮೀಕ್ಷಾ ಕಾರ್ಯವನ್ನು ಹಮ್ಮಿಕೊಂಡಿದೆ.

ಇಂತಹ ಮಕ್ಕಳು ತಮ್ಮ ಗಮನಕ್ಕೆ ಬಂದಲ್ಲಿ ಹತ್ತಿರದ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕರಿಗೆ ಅಥವಾ ಈ ಕೆಳಗಿನ ದೂರವಾಣಿ ಕರೆಮಾಡಲು ಸಾರ್ವಜನಿಕರು, ಪೋಷಕರು, ಸಂಘ ಸಂಸ್ಥೆಗಳು ಮತ್ತು ಜನಪ್ರತಿನಿಧಿಗಳಲ್ಲಿ ವಿನಂತಿಸಿದೆ.

ಸಮನ್ವಯಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಕೇಂದ್ರ ದಕ್ಷಿಣ ವಲಯ – 1 ದೂರವಾಣಿ ಸಂಖ್ಯೆ 9480695034, ಸಮನ್ವಯಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಕೇಂದ್ರ ದಕ್ಷಿಣ ವಲಯ – 2 ದೂರವಾಣಿ ಸಂಖ್ಯೆ 9480695035, ಸಮನ್ವಯಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಕೇಂದ್ರ ದಕ್ಷಿಣ ವಲಯ – 3 ದೂರವಾಣಿ ಸಂಖ್ಯೆ 9480695036, ಸಮನ್ವಯಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಕೇಂದ್ರ ದಕ್ಷಿಣ ವಲಯ – 4 ದೂರವಾಣಿ ಸಂಖ್ಯೆ 9480695037, ಸಮನ್ವಯಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಕೇಂದ್ರ, ಆನೇಕಲ್ – ದೂರವಾಣಿ ಸಂಖ್ಯೆ 9480695033.

**ಸಂಖ್ಯೆ 1301/1401**

## ಎಸಿಬಿ ದಾಳಿ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಕೊಪ್ಪಳ ಜಿಲ್ಲೆಯ ಕಲಕೇರಿ ಗ್ರಾಮ ಪಂಚಾಯಿತಿಯ ರೂ. 40 ಲಕ್ಷ ಮೌಲ್ಯದ ಕ್ರಿಯಾ ಯೋಜನೆಯ ಅನುಮೋದನೆಯ ಸಂಬಂಧ ಗುತ್ತಿಗೆದಾರರಿಂದ ಪಂಚಾಯತ್‌ರಾಜ್ ಇಂಜನಿಯರಿಂಗ್ ವಿಭಾಗದ 1) ಶ್ರೀ.ಶಂಕರ್‌ಮಾಳಗಿ., (ಪ್ರಭಾರ) ಕಾರ್ಯನಿರ್ವಾಹಕ ಅಭಿಯಂತರರು & 2) ಶಿಲ್ಪಾ ಮುಂದಲಮನಿ, ಕಿರಿಯ ಅಭಿಯಂತರರು ಇವರುಗಳು ರೂ.10,000/– ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:14/11/2018 ರಂದು ಶ್ರೀ.ಸತೀಶ್ ಕುಮಾರ್, ಗಣಕಯಂತ್ರ ನಿರ್ವಾಹಕರು. (ಹೊರಗುತ್ತಿಗೆ ನೌಕರ) ಪಂಚಾಯತ್‌ರಾಜ್ ಇಂಜನಿಯರಿಂಗ್ ವಿಭಾಗ ರವರು ದೂರುದಾರರಿಂದ ರೂ.10,000/– ಗಳ ಲಂಚದ ಹಣವನ್ನು ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಕೊಪ್ಪಳ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿ ಬಿದ್ದಿರುತ್ತಾರೆ. ಮೂವರು ಆರೋಪಿಗಳನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ 1302/1402**

# ACB Raid

Bengaluru, November 15(Karnataka Information)

A Contractor of Hatti Village of Koppal Taluk had sought for approval of action plan for works worth Rs.40,00,000/- (forty Lakhs) Of Kalakeri Gram Panchayath. 1)Sri. Shankar Malagi, AEE(I/c EE), & 2) Shilpa Mundalamani, J.E, Panchayath Raj Engineering Division, Koppal, had demanded bribe amount of Rs.10,000/- to do the same.

On 14/11/2018 Sri. Satish Kumar, Computer Operator, (Out Source Employee), O/o Executive Engineer, Panchayath Raj Engineering Division, Koppal, was caught red-handed while accepting the bribe amount of Rs.10,000/- from the compalainant. All the three A.G.O's were arrested and taken into custody and the bribe amount is recovered. The investigation is in progress says official press release.

**ಸಂಖ್ಯೆ 1303/1403**

### ನಾಳೆ 'ಕಾವೇರಿ ಆನ್‌ಲೈನ್ ಸೇವೆ' ಗಳ ಉದ್ಘಾಟನೆ: ದೇಶಪಾಂಡೆ

ಬೆಂಗಳೂರು, ನವೆಂಬರ್ 15, 2018– ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಜನಪರ ಉಪಕ್ರಮವಾದ 'ಕಾವೇರಿ ಆನ್‌ಲೈನ್ ಸೇವೆ'ಗಳನ್ನು ನಾಳೆ, ಅಂದರೆ ನ.16ರ ಶುಕ್ರವಾರದಂದು ಅಧಿಕೃತವಾಗಿ ಉದ್ಘಾಟಿಸಲಾಗುವುದು ಎಂದು ಕಂದಾಯ ಸಚಿವ ಆರ್.ವಿ.ದೇಶಪಾಂಡೆ ತಿಳಿಸಿದ್ದಾರೆ.

ಗುರುವಾರ ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು "ನ.12ರಂದು ಈ ಮೊದಲು ನಿಗದಿಯಾಗಿದ್ದ ಕಾರ್ಯಕ್ರಮವನ್ನು ಅನಿವಾರ್ಯ ಕಾರಣಗಳ ಹಿನ್ನೆಲೆಯಲ್ಲಿ ಮುಂದೂಡಲಾಗಿತ್ತು. ಹೀಗಾಗಿ, ಈ ಕಾರ್ಯಕ್ರಮವನ್ನು ಶುಕ್ರವಾರ ನಡೆಸಲಾಗುತ್ತಿದೆ," ಎಂದು ತಿಳಿಸಿದ್ದಾರೆ.

ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಈ ಸಂಬಂಧ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಕಾವೇರಿ ಆನ್‌ಲೈನ್ ಸೇವೆಗಳನ್ನು ನಾಡಿಗೆ ಸಮರ್ಪಿಸಲಿದ್ದಾರೆ ಎಂದು ದೇಶಪಾಂಡೆ ಹೇಳಿದ್ದಾರೆ.

ಕಾವೇರಿ ಆನ್‌ಲೈನ್ ಸೇವೆಗಳ ಜಾಲದಲ್ಲಿ ಆಸ್ತಿ ನೋಂದಣಿ ಮತ್ತು ಅದಕ್ಕೆ ಸಂಬಂಧಿಸಿದ ಇತರ ಸೇವೆಗಳೆಲ್ಲವೂ ಸಾರ್ವಜನಿಕರಿಗೆ ಅತ್ಯಂತ ಸುಲಭವಾಗಿ, ಅವರಿರುವ ಜಾಗದಲ್ಲೇ ಸಿಗಲಿದೆ. ಜನರು ತಂತ್ರಜ್ಞಾನವನ್ನು ಆಧರಿಸಿದ ಈ ಸೇವೆಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕಂದಾಯ ಸಚಿವರು ತಿಳಿಸಿದರು.

**ಸಂಖ್ಯೆ 1304/1404**

## ಚುನಾಯಿತ ಜನಪ್ರತಿನಿಧಿಗಳು ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ತಮ್ಮ ವೈಯುಕ್ತಿಕ ವಿಚಾರಗಳು ಅಡ್ಡ ಬರಬಾರದು- ಕೆ.ಆರ್. ರಮೇಶ್‌ಕುಮಾರ್

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)

ಚುನಾಯಿತ ಜನಪ್ರತಿನಿಧಿಗಳು ತಾವು ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ತಮ್ಮ ವೈಯುಕ್ತಿಕ ವಿಚಾರಗಳು ಅಡ್ಡ ಬರಬಾರದು, ಜನರ ಪ್ರಾತಿನಿತ್ಯವೇ ಅತಿ ಮುಖ್ಯ ಎಂದು ವಿಧಾನ ಸಭೆಯ ಸಭಾಧ್ಯಕ್ಷರಾದ ಕೆ. ಆರ್. ರಮೇಶ್‌ಕುಮಾರ್ ಅವರು ತಿಳಿಸಿದರು.

ವಿಕಾಸ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಏರ್ಪಡಿಸಿದ್ದ ವಿಧಾನ ಸಭೆ, ವಿಧಾನ ಪರಿಷತ್ತಿಗೆ ಮೊದಲ ಬಾರಿಗೆ ಆಯ್ಕೆಯಾದ ಶಾಸಕರಿಗೆ ಆಯೋಜಿಸಲಾಗಿದ್ದ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು ವಿಧಾನ ಮಂಡಲದ ಕಾರ್ಯಕಲಾಪಗಳು, ಜವಾಬ್ದಾರಿಗಳು ಹಾಗೂ ಹಕ್ಕು ಬಾದ್ಯತೆಗಳ ಅರಿವು ಮೂಡಿಸಲು ಈ ಶಿಬಿರವನ್ನು ಏರ್ಪಡಿಸಲಾಗಿದ್ದು ಪ್ರಥಮ ಬಾರಿಗೆ ಆಯ್ಕೆಯಾಗಿರುವ ಶಾಸಕರು ಇದರ ಸದ್ಬಳಕೆ ಮಾಡಿಕೊಂಡು ವಿಧಾನ ಸಭಾ ಸಭೆಯ ಕಾರ್ಯಕಲಾಪಗಳಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳುವಂತೆ ಶಿಬಿರದಲ್ಲಿ ಹಾಜರಿದ್ದ ಶಾಸಕರಿಗೆ ಸೂಚಿಸಿದರು.

ಬಯಸಿದವರೆಲ್ಲ ವಿಧಾನ ಸಭೆ/ವಿಧಾನ ಪರಿಷತ್ತಿಗೆ ಆಯ್ಕೆಯಾಗಿ ಬರಲು ಸಾಧ್ಯವಿಲ್ಲ. ರಾಜ್ಯದ ಆರು ಕೋಟಿ ಜನರ ಪೈಕಿ ಕೇವಲ 224 ಜನರು ಮಾತ್ರ ಶಾಸನ ಸಭೆಗೆ ಆಯ್ಕೆಯಾಗಿ ಬರುತ್ತಾರೆ.

ಹಾಗಾಗಿ ನೀವು ಪುಣ್ಯವಂತರು ಈ ಅವಕಾಶವನ್ನು ಬಳಸಿಕೊಂಡು ಸಮಸ್ಯೆಯಲ್ಲಿರುವ ಜನರಿಗೆ ಒಳಿತು ಮಾಡುವಲ್ಲಿ ನಿಮ್ಮ ಗಮನ ಸದಾ ಇರಲಿ ಎಂದರು.

ವಿಧಾನ ಸಭೆ  ಅಧಿವೇಶನ ಹಾಗೂ ವಿಧಾನ ಮಂಡಲ ಸಮಿತಿಗಳ ಸಭೆಗೆ ಕಡ್ಡಾಯವಾಗಿ ಹಾಜರಾಗಿ ಚರ್ಚೆಯಲ್ಲಿ ಪಾಲ್ಗೊಳ್ಳಿ ಎಂದು ಮಾತನಾಡಿದ ಅವರು ವಿಧಾನ ಸಭೆ ಅಧಿವೇಶನಕ್ಕೆ ಬರುವ ಮುನ್ನ ಪೂರ್ವ ಸಿದ್ದತೆ ಮಾಡಿಕೊಂಡು ಬಂದು ಸಾರ್ವಜನಿಕ ಸಮಸ್ಯೆಗಳ ಬಗ್ಗೆ ಗಮನ ಸೆಳೆಯಿರಿ ಎಂದು ಸೂಚಿಸಿದರು.

ನಾವು ಆಯ್ಕೆಯಾಗಿರುವುದು ನಮ್ಮ ಸಂವಿಧಾನದ ಜನಪ್ರತಿನಿಧಿ ಕಾಯ್ದೆಯಡಿ ಪ್ರತಿ ಹಂತದಲ್ಲೂ ನಾವು ಜನರನ್ನು ಪ್ರತಿನಿಧಿಸಬೇಕು.  ಜನರ ನೋವು ಕಷ್ಟಗಳಿಗೆ ಸ್ಪಂದಿಸಿ ಕೆಲಸ ಮಾಡಬೇಕು. ಪ್ರಜಾತಂತ್ರ ವ್ಯವಸ್ಥೆಯಲ್ಲಿ ಯಾರಿಗೂ ಸರ್ವಾಧಿಕಾರ ಮನೋಭಾವ ಬರಬಾರದು. ಅಲ್ಲದೆ ಇರಕೂಡದೂ ಎಂದ ಅವರು ಇತ್ತೀಚೆಗೆ ಪ್ರಜಾಪ್ರಭುತ್ವದ ನೆರಳಿನಲ್ಲಿಯೇ ಸರ್ವಾಧಿಕಾರ ಕಂಡು ಬರುತ್ತಿದೆ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಶಿಬಿರದ ಅಧ್ಯಕ್ಷತೆ ವಹಿಸಿ ಮಾತನಾಡಿದ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಪ್ರಥಮ  ಬಾರಿಗೆ ಚುನಾಯಿತರಾಗಿರುವ ಶಾಸಕರು ಸದನಗಳಲ್ಲಿ ಹೆಚ್ಚಿನ ಸಮಯ ಚರ್ಚೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮಾತನಾಡಿದ ಅವರು ಶಾಸಕರು ವಿಧಾನ ಮಂಡಲದ ಅಧಿವೇಶಗಳಿಗೆ ಸಮಯಕ್ಕೆ ಸರಿಯಾಗಿ ಬಂದು ಸದನ ಮುಗಿಯುವವರೆಗೂ ಕುಳಿತುಕೊಳ್ಳುವ ಅಭ್ಯಾಸ ಮಾಡಿಕೊಳ್ಳಬೇಕು ಎಂದರು.

ಶಾಸನ ಸಭೆಗಳಲ್ಲಿ ಸಾರ್ವಜನಿಕ ಸಮಸ್ಯೆಗಳನ್ನು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿ ನ್ಯಾಯಪಡೆಯಬೇಕು ಎಂದು ಮಾತನಾಡಿದ ಬಸವರಾಜ ಹೊರಟ್ಟಿ ಅವರು ವಿಧಾನ ಮಂಡಲದ ಗ್ರಂಥಾಲಯಕ್ಕೆ ಹೋಗುವ ಅಭ್ಯಾಸ ರೂಡಿಸಿಕೊಂಡು ಹೆಚ್ಚಿನ ಅಧ್ಯಯನ ಮಾಡಿದಲ್ಲಿ ವಿಧಾನ ಮಂಡಲದಲ್ಲಿ ಪಾಲ್ಗೊಳ್ಳಿವಿಕೆ ಬಗ್ಗೆ ಅರಿವು ಮೂಡುತ್ತದೆ ಎಂದರು.  ಸಭೆಯಲ್ಲಿ ಅರಣ್ಯ ಸಚಿವ ಶಂಕರ್ ಸೇರಿದಂತೆ ಪ್ರಥಮ ಬಾರಿಗೆ ಆಯ್ಕೆಯಾದ ಶಾಸಕರು ಶಿಬಿರದಲ್ಲಿ ಪಾಲ್ಗೊಂಡಿದ್ದರು.